ಪ್ರಜಾವಾಣಿ
ಶನಿವಾರ • ಡಿಸೆಂಬರ್ 18, 2021

# ಕೆಎಂಸಿ ಕಾರ್ಪೊರೇಟ್ ಕ್ರಿಕೆಟ್ ಲೀಗ್

## ಟ್ರೋಫಿ ಅನಾವರಣಗೊಳಿಸಿದ ಡಾ.ಎಚ್.ಎಸ್. ಬಲ್ಲಾಳ್

ಪ್ರಜಾವಾಣಿ ವಾರ್ತೆ



ಮಣಿಪಾಲದ ಎಂಡ್ ಪಾಯಿಂಟ್ ಕ್ರೀಡಾಂಗಣದಲ್ಲಿ ಶುಕ್ರವಾರ ಕೆಎಂಸಿ ಕಾರ್ಪೊರೇಟ್ ಕ್ರಿಕೆಟ್ ಲೀಗ್‌ಗೆ ಮಾಹೆ ಸಹ ಕುಲಾಧಿಪತಿ ಡಾ.ಎಚ್.ಎಸ್. ಬಲ್ಲಾಳ್ ಚಾಲನೆ ನೀಡಿದರು.

ಉಡುಪಿ: ಆಸ್ಪತ್ರೆಯು ಕಾರ್ಪೊರೇಟ್ ಕಂಪನಿಗಳು, ಬ್ಯಾಂಕ್, ವೈದ್ಯಕೀಯ ಸಂಘ, ಆಸ್ಪತ್ರೆ ಮತ್ತು ಹಾಗೂ ಪತ್ರಕರ್ತರಿಗೆ ಹಮ್ಮಿಕೊಂಡಿರುವ 3 ದಿನಗಳ ಕಾರ್ಪೊರೇಟ್ ಕ್ರಿಕೆಟ್ ಲೀಗ್‌ಗೆ ಮಾಹೆ ಸಹ ಕುಲಾಧಿಪತಿ ಡಾ.ಎಚ್.ಎಸ್. ಬಲ್ಲಾಳ್ ಟ್ರೋಫಿ ಅನಾವರಣಗೊಳಿಸುವ ಮೂಲಕ ಶುಕ್ರವಾರ ಚಾಲನೆ ನೀಡಿದರು.

ಅವರು ಮಾತನಾಡಿ, 'ಕೋವಿಡ್-19 ಕಾರಣದಿಂದ 2 ವರ್ಷ ಕ್ರಿಕೆಟ್ ಪಂದ್ಯಾವಳಿ ಆಯೋಜನೆಗೆ ಅವಕಾಶ ಸಿಕ್ಕಿರಲಿಲ್ಲ. ಈಗ ಕಸ್ತೂರಬಾ ಆಸ್ಪತ್ರೆ ಟೂರ್ನಿ ಆಯೋಜಿಸಿದೆ. ಮಾಹೆ ಸಂಸ್ಥೆಯೂ ಸದಾ ಕ್ರೀಡೆ ಮತ್ತು ಚಟುವಟಿಕೆಗಳಿಗೆ ಬೆಂಬಲ ನೀಡುತ್ತಾ ಬಂದಿದೆ ಎಂದರು.

ಮಾಹೆ ವಿಶ್ವವಿದ್ಯಾಲಯ ಕೇಂದ್ರ ಸರ್ಕಾರದಿಂದ ಇನ್‌ಸ್ಟಿಟ್ಯೂಟ್ ಆಫ್ ಎಮಿನೆನ್ಸ್ ಮಾನ್ಯತೆ ಪಡೆದಿದ್ದು, ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುತ್ತಾ ಬಂದಿದೆ ಎಂದರು.

ಮಾಹೆ ಉಪ ಕುಲಪತಿ ಡಾ.ಎಂ.ಡಿ. ವೆಂಕಟೇಶ್, ಆರೋಗ್ಯ ವಿಜ್ಞಾನ ವಿಭಾಗದ ಸಹ ಕುಲಪತಿ ಡಾ.ಪಿಎಲ್‌ಎನ್‌ಜಿ.ರಾವ್ , ಕೆಎಂಸಿ ಡೀನ್ ಡಾ.ಶರತ್ ಕೆ.ರಾವ್, ಆಸ್ಪತ್ರೆ ಸಿಒಒ ಸಿ.ಜಿ.ಮುತ್ತಣ್ಣ, ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ ಶೆಟ್ಟಿ , ಕೆಎಂಸಿ ಮಂಗಳೂರಿನ ವೈದ್ಯಕೀಯ ಅಧೀಕ್ಷಕ ಡಾ. ಆನಂದ್ ವೇಣುಗೋಪಾಲ್ ಇದ್ದರು.

ಮಣಿಪಾಲದ ಕಸ್ತೂರಬಾ ಆಸ್ಪತ್ರೆಯ ಟೂರ್ನಿ ಆಯೋಜಿಸಿದ್ದು, ಎಂಡ್‌ಪಾಯಿಂಟ್ ಮೈದಾನದಲ್ಲಿ ಪಂದ್ಯಾಟಗಳು ನಡೆಯುತ್ತಿವೆ. ಡಿ.19 ರವರೆಗೆ ಟೂರ್ನಿ ನಡೆಯಲಿದ್ದು, 21 ತಂಡಗಳು ಭಾಗವಹಿಸಿವೆ. 19 ರಂದು ಸಮಾರೋಪ ನಡೆಯಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ವಿ.ಸುನಿಲ್ ಕುಮಾರ್ ಪಾಲ್ಗೊಳ್ಳಲಿದ್ದಾರೆ.

### ಮುಖ್ಯಾಂಶಗಳು

- ಟೂರ್ನಿಯಲ್ಲಿ 21 ತಂಡಗಳ ಪಾಲುದಾರಿಕೆ
- ನಾಳೆ ಸಮಾರೋಪ: ಸಚಿವ ಸುನಿಲ್ ಉಪಸ್ಥಿತಿ
- ಮಾಹೆಯಿಂದ ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ

ಉದಯವಾಣಿ
ಸುದಿನ

ಮಣಿಪಾಲ
2021
ಡಿಸೆಂಬರ್ 18 ಶನಿವಾರ

# ಕಸ್ತೂರ್ಬಾ ಆಸ್ಪತ್ರೆ: ಕಾರ್ಪೊರೆಟ್ ಕ್ರಿಕೆಟ್ ಲೀಗ್ ಉದ್ಘಾಟನೆ



**ಮಣಿಪಾಲ, ಡಿ. 17:** ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯು ಕಾರ್ಪೊರೇಟ್ ಕಂಪೆನಿ, ಬ್ಯಾಂಕ್, ವೈದ್ಯಕೀಯ ಸಂಘ, ಆಸ್ಪತ್ರೆ ಮತ್ತು ಮಾಧ್ಯಮದವರಿಗಾಗಿ ಮೂರು ದಿನಗಳ ಕಾಲ ಆಯೋಜಿಸಿದ ಸೌಹಾರ್ದಯುತ ಕಾರ್ಪೊರೆಟ್ ಕ್ರಿಕೆಟ್ ಲೀಗ್ (ಸಿಸಿಎಲ್ 2021) ಪಂದ್ಯಾಟವನ್ನು ಶುಕ್ರವಾರ ನಡೆದ ಸರಳ ಕಾರ್ಯಕ್ರಮದಲ್ಲಿ ಮಾಹೆ ಸಹ ಕುಲಾಧಿಪತಿ ಡಾ। ಎಚ್. ಎಸ್. ಬಲ್ಲಾಳ್ ಉದ್ಘಾಟಿಸಿದರು.

ಟ್ರೋಫಿ ಅನಾವರಣ ಮಾಡಿ ಮೊದಲ ಟಾಸ್ ಮಾಡುವುದರ ಮೂಲಕ ಅವರು ಪಂದ್ಯಾಟಕ್ಕೆ ಚಾಲನೆ ನೀಡಿದರು. ಮಾಹೆ ಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ।) ಎಂ. ಡಿ. ವೆಂಕಟೇಶ್, ಆರೋಗ್ಯ ವಿಜ್ಞಾನ ವಿಭಾಗದ ಸಹ ಕುಲಪತಿ ಡಾ। ಪಿಎಲ್ಎನ್‌ಜಿ ರಾವ್, ಕೆಎಂಸಿ ಡೀನ್ ಡಾ। ಶರತ್ ಕೆ. ರಾವ್, ಕಸ್ತೂರ್ಬಾ ಆಸ್ಪತ್ರೆ ಸಿಒಒ ಸಿ.ಜಿ. ಮುತ್ತಣ್ಣಮತ್ತು ವೈದ್ಯಕೀಯ ಅಧೀಕ್ಷಕ ಡಾ। ಅವಿನಾಶ್ ಶೆಟ್ಟಿ, ಕೆಎಂಸಿ ಮಂಗಳೂರಿನ ವೈದ್ಯಕೀಯ ಅಧೀಕ್ಷಕ ಡಾ। ಆನಂದ್ ವೇಣುಗೋಪಾಲ್ ಉಪಸ್ಥಿತರಿದ್ದರು.

ಕ್ರಿಕೆಟ್ ಟೂರ್ನಮೆಂಟ್ ಡಿ.17ರಿಂದ 19ರ ವರೆಗೆ ಮಣಿಪಾಲದ ಎಂಡ್ ಪಾಯಿಂಟ್ ಮೈದಾನದಲ್ಲಿ ನಡೆಯಲಿದೆ. 21 ತಂಡಗಳು ಭಾಗವಹಿಸುತ್ತಿವೆ.

ಉದಯವಾಣಿ ಸುದಿನ

ಮಣಿಪಾಲ
2021
ಡಿಸೆಂಬರ್ 20 | ಸೋಮವಾರ

# ಮಣಿಪಾಲ ಆಸ್ಪತ್ರೆಗೆ ಮೊದಲ ಸಿಸಿಎಲ್ ಪ್ರಶಸ್ತಿ




**ಮಣಿಪಾಲ, ಡಿ. 19:** ಕಸ್ತೂರ್ಬಾ ಆಸ್ಪತ್ರೆಯು ಕಾರ್ಪೊರೇಟ್ ಕಂಪೆನಿ, ಬ್ಯಾಂಕ್‌ಗಳು, ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ ಆಯೋಜಿಸಿದ 3 ದಿನಗಳ ಕಾಲ ಸೌಹಾರ್ದಯುತವಾಗಿ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಸಿಸಿಎಲ್ 2021) ಶುಕ್ರವಾರ ಆರಂಭಗೊಂಡು ರವಿವಾರ ಅಂತ್ಯಗೊಂಡಿತು.

ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಕೆ. ಕೆ. ಫಿಶ್ ನೆಟ್ಸ್ ವ್ಯವಸ್ಥಾಪಕ ನಿರ್ದೇಶಕ ಪ್ರಶಾಂತ್ ಬಾಳಿಗ ಪಾಲ್ಗೊಂಡು ಇಂತಹ ಕ್ರೀಡಾಕೂಟಗಳು ಸಂಸ್ಥೆಗಳ ನಡುವೆ ಸ್ನೇಹದ ಸೇತುವೆಯಾಗಲಿದೆ ಎಂದರು. ಕ್ರೀಡಾಕೂಟ ಆಯೋಜಿಸಿದ ಕಸ್ತೂರ್ಬಾ ಆಸ್ಪತ್ರೆಯ ಆಡಳಿತ ಮಂಡಳಿಯನ್ನು ಶ್ಲಾಘಿಸಿದರು.

ಇನ್ನಷ್ಟು ಬೇರೆ ಬೇರೆ ರೀತಿಯ ಕ್ರೀಡಾಕೂಟಗಳು ನಡೆಯಬೇಕು ಎಂದು ಗೌರವ ಅತಿಥಿ, ಮಾಹೆಯ ಆರೋಗ್ಯ ವಿಜ್ಞಾನ ವಿಭಾಗದ ಸಹ ಕುಲಪತಿ ಡಾ| ಪಿಎಲ್‌ಎನ್‌ಜಿ ರಾವ್ ನುಡಿದರು. ಕೆಎಂಸಿ ಡೀನ್ ಡಾ| ಶರತ್ ಕೆ. ರಾವ್, ಕಸ್ತೂರ್ಬಾ ಆಸ್ಪತ್ರೆ ಸಿಒಒ ಸಿ. ಜಿ. ಮುತ್ತಣ್ಣ, ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ ಶೆಟ್ಟಿ ಉಪಸ್ಥಿತರಿದ್ದರು. ಮೊತ್ತ ಮೊದಲ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಕಾರ್ಪೊರೇಟ್ ಕ್ರಿಕೆಟ್ ಲೀಗ್‌ನಲ್ಲಿ ಕಸ್ತೂರ್ಬಾ ಆಸ್ಪತ್ರೆಯವರು ವಿಜೇತರಾಗಿ, ಮಣಿಪಾಲ ಮಾಹೆ ಅವರು ರನ್ನರ್ ಆಪ್ ಪ್ರಶಸ್ತಿ ಪಡೆದರು.

ಅವಿನಾಶ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದರು. ವಿನಯ್ ಅವರು ಪಂದ್ಯಶ್ರೇಷ್ಠ ವಿಘ್ನೇಶ್ ಅವರು ಉತ್ತಮ ದಾಂಡಿಗ ಮತ್ತು ವಿನಯ್ ಅವರು ಉತ್ತಮ ದಾಳಿಗಾರ ಪ್ರಶಸ್ತಿ ಪಡೆದರು.

ವಿಜಯವಾಣಿ
VIJAYAVANI » MANGALURU
ಸೋಮವಾರ 20 ಡಿಸೆಂಬರ್ 2021
20 DECEMBER 2021

# ಕಸ್ತೂರ್ಬಾ ಆಸ್ಪತ್ರೆ ತಂಡಕ್ಕೆ ಸಿಸಿಎಲ್ ಪ್ರಶಸ್ತಿ




ಕಾರ್ಪೊರೇಟ್ ಕ್ರಿಕೆಟ್ ಲೀಗ್ ಪಂದ್ಯಾಟದಲ್ಲಿ ಪ್ರಥಮ ಸ್ಥಾನ ಪಡೆದ ಕಸ್ತೂರ್ಬಾ ಆಸ್ಪತ್ರೆ ತಂಡಕ್ಕೆ ಉದ್ಯಮಿ ಪ್ರಶಾಂತ್ ಬಾಳಿಗಾ ಬಹುಮಾನ ವಿತರಿಸಿದರು. ಕೆಎಂಸಿ ಸಹ ಕುಲಪತಿ ಡಾ. ಪಿಎಲ್‌ಎನ್‌ಜಿ ರಾವ್, ಕೆ ಎಂ ಸಿ ಡೀನ್ ಡಾ. ಶರತ್ ಕೆ. ರಾವ್, ಕಸ್ತೂರ್ಬಾ ಆಸ್ಪತ್ರೆ ಸಿಒಒ ಸಿ.ಜಿ. ಮುತ್ತಣ್ಣ ಮತ್ತು ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ ಶೆಟ್ಟಿ ಉಪಸ್ಥಿತರಿದ್ದರು.

■ ವಿಜಯವಾಣಿ ಸುದ್ದಿಜಾಲ ಉಡುಪಿ

ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕಂಪನಿ, ವಿವಿಧ ಬ್ಯಾಂಕ್, ವೈದ್ಯಕೀಯ ಸಂಘ, ವಿವಿಧ ಆಸ್ಪತ್ರೆ ಮತ್ತು ಪತ್ರಕರ್ತರಿಗಾಗಿ 3 ದಿನ ನಡೆದ ಸೌಹಾರ್ದ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಸಿಸಿಎಲ್ 2021) ಪಂದ್ಯಾಟದಲ್ಲಿ ಕಸ್ತೂರ್ಬಾ ಆಸ್ಪತ್ರೆ ತಂಡ ಪ್ರಥಮ ಸ್ಥಾನ ಪಡೆದಿದೆ. ಮಾಹೆ ಮಣಿಪಾಲ ತಂಡ ರನ್ನರ್‌ಅಪ್ ಪ್ರಶಸ್ತಿ ಪಡೆದಿದೆ. ಆಟಗಾರ ಅವಿನಾಶ ಸರಣಿ ಶ್ರೇಷ್ಠ ಪ್ರಶಸ್ತಿ, ವಿನಯ್ ಪಂದ್ಯ ಶ್ರೇಷ್ಠ, ವಿಘ್ನೇಶ್ ಉತ್ತಮ ದಾಂಡಿಗ ಮತ್ತು ವಿನಯ್ ಉತ್ತಮ ದಾಳಿಗಾರ ಪ್ರಶಸ್ತಿ ಪಡೆದರು.

ಭಾನುವಾರ ಸಮಾರೂಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿದ್ದ ಉದ್ಯಮಿ ಪ್ರಶಾಂತ್ ಬಾಳಿಗ ಪ್ರಶಸ್ತಿ ವಿತರಿಸಿ, ಕ್ರೀಡಾಕೂಟಗಳು ಸಂಸ್ಥೆಗಳ ನಡುವೆ ಸ್ನೇಹದ ಸೇತುವೆಯಾಗಲಿದೆ ಎಂದರು.

ಮಾಹೆ ಆರೋಗ್ಯ ವಿಜ್ಞಾನ ವಿಭಾಗದ ಸಹ ಕುಲಪತಿ ಡಾ. ಪಿಎಲ್‌ಎನ್‌ಜಿ ರಾವ್ ಗೌರವ ಅತಿಥಿಯಾಗಿದ್ದರು. ಕೆಎಂಸಿ ಡೀನ್ ಡಾ. ಶರತ್ ಕೆ. ರಾವ್, ಕಸ್ತೂರ್ಬಾ ಆಸ್ಪತ್ರೆ ಸಿಒಒ ಸಿ.ಜಿ. ಮುತ್ತಣ್ಣ ಮತ್ತು ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ ಶೆಟ್ಟಿ ಉಪಸ್ಥಿತರಿದ್ದರು.

ಪ್ರಜಾವಾಣಿ ಸೋಮವಾರ • ಡಿಸೆಂಬರ್ 20, 2021

## ವಿನಯ್ ಆಕರ್ಷಕ ಅರ್ಧ ಶತಕ; ಮಾಹೆ ಮಣಿಪಾಲ್ ರನ್ನರ್ ಅಪ್

# ಕಸ್ತೂರಬಾ ಆಸ್ಪತ್ರೆಗೆ ಸಿಸಿಎಲ್ ಪ್ರಶಸ್ತಿ

ಪ್ರಜಾವಾಣಿ ವಾರ್ತೆ

ಉಡುಪಿ: ಮಣಿಪಾಲದ ಎಂಡ್ ಪಾಯಿಂಟ್ ಕ್ರೀಡಾಂಗಣದಲ್ಲಿ ಭಾನುವಾರ ಮುಕ್ತಾಯವಾದ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಸಿಸಿಎಲ್-2021) ಟೂರ್ನಿಯಲ್ಲಿ ಮಣಿಪಾಲದ ಕಸ್ತೂರಬಾ ಆಸ್ಪತ್ರೆ ತಂಡ ಪ್ರಶಸ್ತಿ ಮುಡಿಗೇರಿಸಿಕೊಂಡಿತು.

ಫೈನಲ್ ಪಂದ್ಯದಲ್ಲಿ ಮೊದಲ ಬ್ಯಾಟಿಂಗ್ ಮಾಡಿದ ಕಸ್ತೂರಬಾ ಆಸ್ಪತ್ರೆ ತಂಡವು ವಿನಯ್ ಅವರ ಆಕರ್ಷಕ ಅರ್ಧ ಶತಕದ (56 ರನ್ 23 ಬಾಲ್) ನೆರವಿನಿಂದ ನಿಗದಿತ 8 ಓವರ್‌ಗಳಲ್ಲಿ 2 ವಿಕೆಟ್ ನಷ್ಟಕ್ಕೆ 127 ರನ್ ಕಲೆ ಹಾಕಿತು. ಅವಿನಾಶ್ 7 ಬಾಲ್‌ಗಳಲ್ಲಿ 28 ರನ್ ಸಿಡಿಸಿದರೆ, ಹರಿ ಕಿರಣ್ 9 ಬಾಲ್‌ಗಳಿಗೆ 25 ರನ್ ಬಾರಿಸಿ ತಂಡ ಉತ್ತಮ ರನ್ ಪೇರಿಸಲು ನೆರವಾದರು.

128 ರನ್ ಗುರಿ ಬೆನ್ನತ್ತಿದ ಮಾಹೆ ಮಣಿಪಾಲ್ ತಂಡ 7 ವಿಕೆಟ್ ನಷ್ಟಕ್ಕೆ 91 ರನ್‌ಗಳಿಸಷ್ಟೆ ಶಕ್ತವಾಯಿತು. ಕಸ್ತೂರಬಾ ಆಸ್ಪತ್ರೆ ತಂಡ 37 ರನ್‌ಗಳಿಂದ ಮಾಹೆ ತಂಡವನ್ನು ಮಣಿಸಿತು.

### ಸರಣಿ ಶ್ರೇಷ್ಠ

ಅವಿನಾಶ್ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದುಕೊಂಡರೆ, ವಿನಯ್ ಪಂದ್ಯ ಶ್ರೇಷ್ಠ ಗೌರವಕ್ಕೆ ಪಾತ್ರರಾದರು. ವಿಘ್ನೇಶ್ ಉತ್ತಮ ಬ್ಯಾಟ್ಸ್‌ಮನ್, ವಿನಯ್ ಉತ್ತಮ ಬೌಲರ್ ಶ್ರೇಯ ಮುಡಿಗೇರಿಸಿಕೊಂಡರು.



ಕಾರ್ಪೊರೇಟ್ ಕ್ರಿಕೆಟ್ ಲೀಗ್ ಟೂರ್ನಿಯಲ್ಲಿ ಮಣಿಪಾಲದ ಕಸ್ತೂರಬಾ ಆಸ್ಪತ್ರೆ ತಂಡ ಪ್ರಶಸ್ತಿ ಮುಡಿಗೇರಿಸಿಕೊಂಡಿತು.

ಕಸ್ತೂರಬಾಆಸ್ಪತ್ರೆಮಣಿಪಾಲದಿಂದ ಆಯೋಜಿಸಿದ್ದ ಟೂರ್ನಿಯಲ್ಲಿ ಕಾರ್ಪೊರೇಟ್ ಕಂಪನಿಗಳು, ಬ್ಯಾಂಕ್‌ಗಳು, ವೈದ್ಯಕೀಯ ಸಂಘ, ಆಸ್ಪತ್ರೆಗಳು ಹಾಗೂ ಮಾಧ್ಯಮ ತಂಡ ಭಾಗವಹಿಸಿತ್ತು. 3 ದಿನಗಳ ಕಾಲ ಟೂರ್ನಿ ನಡೆಯಿತು. ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿದ್ದ ಕೆಕೆ ಫಿಶ್ ನೆಟ್ಸ್ ವ್ಯವಸ್ಥಾಪಕ ನಿರ್ದೇಶಕ ಪ್ರಶಾಂತ್ ಬಾಳಿಗಾ ಮಾತನಾಡಿ, ಕ್ರೀಡಾಕೂಟಗಳು ಸಂಸ್ಥೆಗಳ ನಡುವೆ ಸ್ನೇಹದ ಸೇತುವೆಯಾಗಲಿದೆ ಎಂದರು.

ಆರೋಗ್ಯ ವಿಜ್ಞಾನ ವಿಭಾಗದ ಸಹ ಕುಲಪತಿ ಡಾ.ಪಿಎಲ್‌ಎನ್‌ಜಿ ರಾವ್, ಕೆಎಂಸಿ ಡೀನ್ ಡಾ.ಶರತ್ ಕೆ.ರಾವ್, ಕಸ್ತೂರಬಾ ಆಸ್ಪತ್ರೆ ಸಿಒಒ ಸಿ.ಜಿ. ಮುತ್ತಣ್ಣ, ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ ಶೆಟ್ಟಿ ಇದ್ದರು,.

## Hai Karavali: 18th Dec 2021

# ಕಸ್ತೂರ್ಬಾ ಆಸ್ಪತ್ರೆಯ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಸಿ ಸಿ ಎಲ್ 2021) ಉದ್ಘಾಟನೆ



ಮಣಿಪಾಲ 17ನೇ ಡಿಸೆಂಬರ್ 2021:ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕಂಪನಿ , ಬ್ಯಾಂಕಗಳು , ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತವಾಗಿ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಸಿ ಸಿ ಎಲ್ 2021) ಆಯೋಜಿಸಿದೆ. ಇಂದು ನಡೆದ ಸಮಾರಂಭ ಕಾರ್ಯಕ್ರಮದಲ್ಲಿ ಮಾಹೆ ಮಣಿಪಾಲದ ಸಹ ಕುಲಾಧಿಪತಿಗಳಾದ ಡಾ. ಎಚ್ ಎಸ್ ಬಲ್ಲಾಳ್ ಅವರು ಟ್ರೋಫಿ ಅನಾವರಣ ಮಾಡಿ ಮೊದಲ ಟಾಸ್ ಮಾಡುವುದರ ಮೂಲಕ ಅವರು ಕಸ್ತೂರ್ಬಾ ಆಸ್ಪತ್ರೆ ಸಿ ಸಿ ಎಲ್ 2021 ಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡುತ್ತಾ " ಕೋವಿಡ್ ಕಾರಣದಿಂದ ಕಳೆದ 2 ವರ್ಷಗಳಿಂದ ಹೆಚ್ಚಿನವರಿಗೆ ಆಡಲು ಅವಕಾಶ ಸಿಗಲಿಲ್ಲ. ಈಗ ಇದಕ್ಕೆ ಒಂದು ಅವಕಾಶವನ್ನುಕಸ್ತೂರ್ಬಾ ಆಸ್ಪತ್ರೆ ಮಾಡಿಕೊಟ್ಟಿದೆ. ಮಾಹೆ ಮಣಿಪಾಲವು ಯಾವಾಗಲೂ ಕ್ರೀಡೆ ಮತ್ತು ಚಟುವಟಿಕೆಗಳಿಗೆ ತುಂಬಾ ಬೆಂಬಲ ನೀಡುತ್ತದೆ. ಕೆಲವೇ ಕೆಲವು ವಿಶ್ವವಿದ್ಯಾನಿಲಯಗಳು ಇನ್ಸ್ಟಿಟ್ಯೂಟ್ ಆಫ್ ಎಮಿನೆನ್ಸ್ (ಐಒಇ) ಗಾಗಿ ಭಾರತ ಸರಕಾರದಿಂದ ಗುರುತಿಸಲ್ಪಟ್ಟಿವೆ. ಅವುಗಳಲ್ಲಿ ಮಾಹೆ ಮಣಿಪಾಲವು ಸಹ ಒಂದಾಗಿದೆ. ಎಂದರು. ಈ ಸಂದರ್ಭದಲ್ಲಿ ಮಾಹೆ ಮಣಿಪಾಲದ ಉಪ ಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್ . ಆರೋಗ್ಯ ವಿಜ್ಞಾನ ವಿಭಾಗದ ಸಹ ಕುಲಪತಿಗಳಾದ –ಡಾ. ಪಿಎಲ್ಎನ್ ಜಿ ರಾವ್ , ಕೆ ಎಂ ಸಿ ಡೀನ್ ಡಾ. ಶರತ್ ಕೆ ರಾವ್, ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಿ ಒ ಒ ಶ್ರೀ ಸಿ ಜಿ ಮುತ್ತಣ್ಣ ಮತ್ತು ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ ಶೆಟ್ಟಿ , ಕೆ ಎಂ ಸಿ. ಮಂಗಳೂರಿನ ವೈದ್ಯಕೀಯ ಅಧೀಕ್ಷಕರಾದ ಡಾ. ಆನಂದ್ ವೇಣುಗೋಪಾಲ್ ಉಪಸ್ಥಿತರಿದ್ದರು.

ಕ್ರಿಕೆಟ್ ಟೂರ್ನಮೆಂಟ್ 17ನೇ ಡಿಸೆಂಬರ್ 2021ರಿಂದ 19ನೇ ಡಿಸೆಂಬರ್ 2021ರ ವರೆಗೆ ಮಣಿಪಾಲದ ಎಂಡ್ ಪಾಯಿಂಟ್ ಮೈದಾನದಲ್ಲಿ ನಡೆಯಲಿದೆ, ಸುಮಾರು 21 ತಂಡಗಳು ಭಾಗವಹಿಸುತ್ತಿವೆ. ಡಿಸೆಂಬರ್ 19ರಂದು ನಡೆಯುವ ಸಮಾರೋಪ ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಹಾಗೂ ಇಂಧನ ಸಚಿವರಾದ ವಿ ಸುನಿಲ್ ಕುಮಾರ್ ಅವರು ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.



PAGE: 03 HAI KARAVALI Kannada Daily ಹಾಯ್ ಕರಾವಳಿ Date:18December 2021 Saturday ಶನಿವಾರ

## Hai Karavali - 20th Dec 2021

# ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಕ್ಕೆ ಮೊದಲ ಸಿಸಿಲ್ 2020 ಪ್ರಶಸ್ತಿ




ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಸಿ ಸಿ ಎಲ್ 2021) ಸಮಾರೋಪ ಸಮಾರಂಭ ಮಣಿಪಾಲ 19ನೇ ಡಿಸೆಂಬರ್ 2021:ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕಂಪನಿ , ಬ್ಯಾಂಕ್ ಗಳು , ವೈದ್ಯಕೀಯ ಸಂಘ , ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತವಾಗಿ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಸಿ ಸಿ ಎಲ್ 2021) ಆಯೋಜಿಸಿತ್ತು. 17ನೇ ಡಿಸೆಂಬರ್ 2021ರಂದು ಆರಂಭವಾದ ಕೂಟವು ಇಂದು ಅಂತ್ಯಗೊಂಡಿತು. ಇಂದು ನಡೆದ ಸಮಾರೂಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಕೆ ಕೆ ಫಿಶ್ ನೆಟ್ಸ್ ನ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಪ್ರಶಾಂತ್ ಬಾಳಿಗಾ ಪಾಲ್ಗೊಂಡಿದ್ದರು. ಇವರು ಮಾತನಾಡುತ್ತಾ ಇಂತಹ ಕ್ರೀಡಾಕೂಟಗಳು ಸಂಸ್ಥೆಗಳ ನಡುವೆ ಸ್ನೇಹದ ಸೇತುವೆಯಾಗಲಿದೆ ಎಂದರು ಮತ್ತು ಆಯೋಜಿಸಿದ ಕಸ್ತೂರ್ಬಾ ಆಸ್ಪತ್ರೆಯ ಆಡಳಿತ ಮಂಡಳಿಯನ್ನು ಶ್ಲಾಘಿಸಿದರು ಆರೋಗ್ಯ ವಿಜ್ಞಾನ ವಿಭಾಗದ ಸಹ ಕುಲಪತಿಗಳಾದ –ಡಾ. ಪಿಎಲ್ಎನ್ ಜಿ ರಾವ್ ಗೌರವ ಅತಿಥಿಯಾಗಿದ್ದರು ಮತ್ತು ಅವರು ಮಾತನಾಡುತ್ತಾ ,ಇನ್ನಷ್ಟು ಬೇರೆ ಬೇರೆ ರೀತಿಯ ಕ್ರೀಡಾಕೂಟಗಳು ನಡೆಯಬೇಕು ಎಂದರು. ಕೆ ಎಂ ಸಿ ಡೀನ್ ಡಾ. ಶರತ್ ಕೆ ರಾವ್, ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಿ ಒ ಒ ಶ್ರೀ ಸಿ ಜಿ ಮುತ್ತಣ್ಣ ಮತ್ತು ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ ಶೆಟ್ಟಿ ಉಪಸ್ಥಿತರಿದ್ದರು. ಮೊತ್ತ ಮೊದಲ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಸಿ ಸಿ ಎಲ್ 2021) ನಲ್ಲಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಅವರು ವಿಜೇತರಾಗಿ ಮಾಹೆ ಮಣಿಪಾಲ ಅವರು ರನ್ನರ್ ಆಪ್ ಪ್ರಶಸ್ತಿ ಪಡೆದರು. ಅವಿನಾಶ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದರು. ವಿನಯ್ ಅವರು ಪಂದ್ಯ ಶ್ರೇಷ್ಠ , ವಿಘ್ನೇಶ್ ಅವರು ಉತ್ತಮ ದಾಂಡಿಗ ಮತ್ತು ವಿನಯ್ ಅವರು ಉತ್ತಮ ದಾಳಿಗಾರ ಪ್ರಶಸ್ತಿ ಪಡೆದರು.

## Other Links:

## Inauguration Ceremony

- Public Next :https://publicnext.com/article/nid/Udupi/Cultural-Activity/node=575513
- Suddi Kirana: https://suddikirana.com/kreede/kmc-ccl/
- Karavali Xpress : https://karavalixpress.com/news/coastal/ccl/
- Udupi Xpress : https://udupixpress.com/manipal-drive-to-kasturba-hospitals-corporate-cricket-tournament/

## Valedictory Ceremony

- Namma Udupi Bulletin: https://nammaudupibulletin.com/suddigalu/pradeshika/kasturba-hospital-manipal-wins-the-first-ccl-trophy/
- Suddi Kirana : https://suddikirana.com/kreede/manipal-kmc-hospital-gains-ccl-2021/
- The Canara Post : https://bit.ly/3mhC5gx
- Karavali Xpress : https://karavalixpress.com/achievement/ccl-2/